ಅಸಲು ದಾವೆ ನಂ.86/2022

ಡಿ.ಡಬ್ಲೂಃ 1– ಪದ್ಮನಾಬಯ್ಯ ಬಿನ್ ಪರಮೇಶ್ವರಾಚಾರ್

ದಿನಾಂಕಃ 09/06/2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.

**ಮುಂದುವರಿದ ಮುಖ್ಯ ವಿಚಾರಣೆ 1 ರಿಂದ 4 ನೇ ಪ್ರತಿವಾದಿಯರ ಪರವಾಗಿ ಶ್ರೀ ಸಿ.ಎಸ್.ಎಸ್. ವಕೀಲರಿಂದ**

ನಾನು ಈ ದಾವೆಯಲ್ಲಿ 1 ನೇ ಪ್ರತಿವಾದಿ ಆಗಿದ್ದು ನ್ಯಾಯಾಲಯದ ಮುಂದೆ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ನಾನು ಅದನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾವು ಈ ದಾವೆಯಲ್ಲಿ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿರುತ್ತೇವೆ.

ನಿಶಾನೆ ಡಿ-1- ಎ.ಡಿ.ಎಲ್.ಆರ್, ಕೇಂದ್ರ ಕಛೇರಿ ಬೆಂಗಳೂರು ರವರು ನೀಡಿರುವ ಹಿಂಬರಹ

ನಿಶಾನೆ ಡಿ-2- ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು ಭೂ-ಮಾಪನ ಇಲಾಖೆ ಆಯುಕ್ತರಿಗೆ ಬರೆದಿರುವ ಪತ್ರದ ನಕಲು

ನಿಶಾನೆ ಡಿ-3- ಭೂ-ಮಾಪನ ಇಲಾಖೆ ಆಯುಕ್ತರ ಕಛೇರಿ ನಡವಳಿಕೆಗಳ ನಕಲು

ಆದ್ದರಿಂದ ಈ ದಾವೆಯನ್ನು ವಜಾಗೊಳಿಸಬೇಕಾಗಿ ಮಾನ್ಯ ನ್ಯಾಯಾಲಯಕ್ಕೆ ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲು ವಾದಿ ಪರವಾಗಿ ಶ್ರೀ ಎಸ್.ಎನ್.ಎಂ. ವಕೀಲರಿಂದ**

ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿರುವುದರಿಂದ ಪಾಟೀ ಸವಾಲು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿ.ಇದೆ.

ಸಹಿ/–

(ಮುಜಫರ್)

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ

ತರೀಕೆರೆ